# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 951

ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ.

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 24.07.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ, ಸಾರ್ವಜನಿಕರ ಸಂಚಾರಕ್ಕೆ ವಿವಿಧ ಘಟಕಗಳಿಂದ ಸಂಚರಿಸುತ್ತಿರುವ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು; (ಮಾರ್ಗ ಮತ್ತು ಸಮಯವಾರು ಮಾಹಿತಿಯನ್ನು ನೀಡುವುದು) | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿ ಪುತ್ತೂರು ವಿಭಾಗದ ಘಟಕಗಳು ಹಾಗೂ ನಿಗಮದ ಇನ್ನಿತರೆ ವಿಭಾಗದ ಘಟಕಗಳಿಂದ 532 ಬಸ್ಸು (ಅನುಸೂಚಿಗಳು)ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಸದರಿ ಬಸ್‌ಗಳ ಮಾರ್ಗ ಮತ್ತು ಬಸ್ ನಿಲ್ದಾಣವಾರು ನಿರ್ಗಮನಗಳ ಸಮಯವಾರು ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಆ. | ಜಿಲ್ಲೆಯ ಹಲವು ಕಡೆಗಳಲ್ಲಿ ಕೆಲ ಬಸ್ಸುಗಳು ತಿಂಗಳಿಗೊಮ್ಮೆ ಅಥವಾ ತಿಂಗಳಿಗೆ 2 ರಿಂದ 3 ಬಾರಿ ಮಾತ್ರ ಸಂಚರಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರಲಿಲ್ಲ.**<br><br>ಆದಾಗ್ಯೂ ಪ್ರಸ್ತುತ ಕೊಡಗು ಜಿಲ್ಲೆಯ ವ್ಯಾಪ್ತಿಯಲ್ಲಿ ಕಾರ್ಯಾಚರಣೆಯಲ್ಲಿರುವ ಹೆಚ್ಚಿನ ಸಾರಿಗೆಗಳನ್ನು ನಿಯಮಿತವಾಗಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಶಾಲಾ/ಕಾಲೇಜು ಸುತ್ತುವಳಿಗಳನ್ನು ಶಾಲಾ/ಕಾಲೇಜು ರಜೆಯ ಸಂದರ್ಭಗಳಲ್ಲಿ ಮಾತ್ರ ಯೋಜಿತ ರದ್ದತಿ ಮಾಡಿ ಇನ್ನಿತರೆ ಅವಶ್ಯಕ ಮಾರ್ಗಗಳಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಆದಾಗ್ಯೂ, ಸೋಮವಾರಪೇಟೆ ಮತ್ತು ವಿರಾಜಪೇಟೆ ವಲಯಕ್ಕೆ ಕಾರ್ಯಾಚರಣೆಯಲ್ಲಿರುವ 07 ಸುತ್ತುವಳಿಗಳು ಸಾಂದರ್ಭಿಕ ಒಪ್ಪಂದ/ಜಾತ್ರೆ/ ಹೆಚ್ಚುವರಿ ಕಾರ್ಯಾಚರಣೆ ಮುಂತಾದ ಅನಿವಾರ್ಯ ಸಂದರ್ಭಗಳಲ್ಲಿ ಅನಿಯಮಿತವಾಗಿ ಕಾರ್ಯಾಚರಣೆಯಲ್ಲಿದ್ದು, ಸದರಿ ಸಾರಿಗೆಗಳನ್ನು ನಿಯಮಿತವಾಗಿ ಕಾರ್ಯಾಚರಣೆಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ. | ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಸುಲಭ ಸಂಚಾರಕ್ಕೆ ಸಹಾಯವಾಗುವಂತೆ ಎಷ್ಟು ಬಸ್ ಪಾಸ್‌ಗಳನ್ನು ವಿತರಿಸಲಾಗಿದೆ? | 2024-25ನೇ ಸಾಲಿನಲ್ಲಿ ಸಂಪೂರ್ಣ ಗಣಕೀಕೃತವಾಗಿ ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಿ, ವಿದ್ಯಾರ್ಥಿ ಬಸ್‌ಪಾಸ್‌ಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ, 2024-25ನೇ ಸಾಲಿನಲ್ಲಿ ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ದಿನಾಂಕ:30.06.2024ರ ಅಂತ್ಯದವರೆಗೆ ಒಟ್ಟು 782 ವಿದ್ಯಾರ್ಥಿಗಳಿಗೆ ಬಸ್ ಪಾಸ್‌ಗಳನ್ನು ವಿತರಿಸಲಾಗಿದೆ. |

ಸಂಖ್ಯೆ: ಟಿಡಿ 152 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು